ಓ.ಎಸ್.ನಂಃ 114/2015

**ಡಿಡಬ್ಲ್ಯೂ-1**

**ಸಾಕ್ಷಿಯನ್ನು ಕರೆಯಿಸಿ ದಿನಾಂಕಃ 27.04.2026 ರಂದು ಪ್ರಮಾಣಿಕರಿಸಲಾಯಿತು.**

**ಮುಂದುವರೆದ ಪಾಟೀ ಸವಾಲು: ವಾದಿ ಪರ ವಕೀಲರಿಂದಃ**

ನಿಡಿ3 ರಲ್ಲಿ ದಕ್ಷಿಣಕ್ಕೆ ರಸ್ತೆ ಇದೆ ಎಂದು ನಮೂದು ಇದೆ ಎಂದರೆ ಸರಿ. ಸದರಿ ರಸ್ತೆಯನ್ನು ನಾವಾಗಲಿ, ಪ್ರತಿವಾದಿಗಳಾಗಲಿ ಅತೀಕ್ರಮಿಸುವ ಹಕ್ಕು ಇಲ್ಲ ಎಂದರೆ ಸರಿ. 5 ಅಡಿ ಸೆಟ್ ಬ್ಯಾಕ್ ಬಿಟ್ಟು ಮನೆ ನಿರ್ಮಿಸಿದ್ದೇನೆ ಎಂದು ತೋರಿಸಲು ನಕ್ಷೆ ಹಾಜರುಪಡಿಸಿಲ್ಲ. ನಾನು ಸಾರ್ವಜನಿಕ ರಸ್ತೆಯಲ್ಲಿ ಸುಮಾರು 8 ಅಡಿ ಅತೀಕ್ರಮಿಸಿ ಮನೆ ನಿರ್ಮಿಸಿದ್ದೇನೆ ಎಂದರೆ ಸರಿಯಲ್ಲ. ಆ ಕಾರಣ ವಾದಿ ಮತ್ತು ಇತರ ಸಾರ್ವಜನಿಕರು ಸದರಿ ರಸ್ತೆಯಲ್ಲಿ ತಿರುಗಾಡಲು ತೊಂದರೆಯಾಗುತ್ತಿದೆ ಎಂದರೆ ಸರಿಯಲ್ಲ. ವಾದಿಯ ತಂದೆ ಮರಣ ಹೊಂದಿದ ನಂತರ ಆಕೆಯ ಸ್ವತ್ತನ್ನು ಖಾತಾ ಮಾಡಿಕೊಡುವಂತೆ ಅರ್ಜಿ ಸಲ್ಲಿಸಿದ್ದರು ಎಂದರೆ ನನಗೆ ಗೊತ್ತಿಲ್ಲ. ಸದರಿ ಅರ್ಜಿಗೆ ನಾನು ತಕರಾರು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

**(ಗಿರೀಶ ಆರ್.ಬಿ)**

ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ

ಗುಂಡ್ಲುಪೇಟೆ